# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೇಳನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಶುಕ್ರವಾರ ದಿನಾಂಕ: 23ನೇ ಸೆಪ್ಟೆಂಬರ್, 2022**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹತ್ತನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:**

| | |
|---|---|
| 4ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಸಲೀಂ ಅಹಮದ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 51 (364) | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು |
| 5ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಎಸ್.ವ್ಹಿ. ಸಂಕನೂರ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 72 (573)<br>5ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಯು.ಬಿ.ವೆಂಕಟೇಶ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 74 (505) | ಮಾನ್ಯ ರೇಷ್ಮೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು |
| 8ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಸಲೀಂ ಅಹಮದ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 106 (926) | ಮಾನ್ಯ ಕಂದಾಯ ಸಚಿವರು |
| 8ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಪಿ.ಆರ್. ರಮೇಶ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 112 (911) | ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹತ್ತನೆಯ ಪಟ್ಟಿ

## 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ ಕರ್ನಾಟಕ ಭೂ ಕಬಳಿಕೆ ನಿಷೇಧ (ತಿದ್ದುಪಡಿ) ವಿಧೇಯಕ, 2022ನ್ನು ಹಾಗೂ ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.**

01. ಕರ್ನಾಟಕ ಸ್ಟಾಂಪು (ಮೂರನೇ ತಿದ್ದುಪಡಿ) ವಿಧೇಯಕ, 2022

02. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಲಿ (ತಿದ್ದುಪಡಿ) ವಿಧೇಯಕ, 2022

03. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2022

## 03. ಶಾಸನ ರಚನೆ

### ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

01. ಕರ್ನಾಟಕ ಭೂ ಕಬಳಿಕೆ ನಿಷೇಧ (ತಿದ್ದುಪಡಿ) ವಿಧೇಯಕ, 2022
**ಶ್ರೀ ಆರ್.ಅಶೋಕ್ (ಮಾನ್ಯ ಕಂದಾಯ ಸಚಿವರು)** ಅವರು:-

ಅ) ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ಭೂ ಕಬಳಿಕೆ ನಿಷೇಧ (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಕರ್ನಾಟಕ ಸ್ಟಾಂಪು (ಮೂರನೇ ತಿದ್ದುಪಡಿ) ವಿಧೇಯಕ, 2022
**ಶ್ರೀ ಆರ್.ಅಶೋಕ್ (ಮಾನ್ಯ ಕಂದಾಯ ಸಚಿವರು)** ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ಸ್ಟಾಂಪು (ಮೂರನೇ ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಲಿ (ತಿದ್ದುಪಡಿ) ವಿಧೇಯಕ, 2022
**ಶ್ರೀ ಬಿ.ಸಿ. ನಾಗೇಶ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು)** ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಲಿ (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

04. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2022

**ಶ್ರೀ ಬಿ.ಸಿ. ನಾಗೇಶ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು)** ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

..3/

## 04. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಪುಟ್ಟಣ್ಣ** ಅವರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ಕೆಂಪೇಗೌಡ ಬಡಾವಣೆ ನಿರ್ಮಾಣ ಹಾಗೂ ಪೆರಿಫೆರಲ್ ರಸ್ತೆ ನಿರ್ಮಾಣಕ್ಕಾಗಿ ಸ್ವಾಧೀನ ಪಡಿಸಿಕೊಂಡಿರುವ ರೈತರ ಜಮೀನುಗಳನ್ನು ಅನ್ಯ ಉದ್ದೇಶಗಳಿಗೆ ಬಳಸಿಕೊಳ್ಳುತ್ತಿರುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

02. **ಶ್ರೀ ಮಧು ಜಿ. ಮಾದೇಗೌಡ** ಅವರು ಸಹಾಯಕ ಪ್ರಾಧ್ಯಾಪಕರುಗಳಿಗೆ ಪತಿ–ಪತ್ನಿ ಪ್ರಕರಣದಡಿ ಸ್ಥಳ ಮಾರ್ಪಾಡು ಮಾಡಿಕೊಳ್ಳಲು ಅವಕಾಶ ಕಲ್ಪಿಸುವ ಕುರಿತು ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

03. **ಶ್ರೀ ಬಿ.ಎಂ. ಫಾರೂಖ್** ಅವರು ವ್ಯಾಪಾರ ಹಾಗೂ ವಾಣಿಜ್ಯ ಉದ್ದೇಶಕ್ಕಾಗಿ ವಿದೇಶಿ ಕಂಪನಿಗಳೊಂದಿಗೆ ಬಂಡವಾಳ ಹೂಡಲು ಹಾಗೂ ವ್ಯಾಪಾರ ಮಾಡಲು ವಿಧಾನ ಮಂಡಲದ ಶಾಸಕರುಗಳಿಗೆ ಇರುವ ಅಡೆತಡೆಗಳ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

04. **ಶ್ರೀ ಗಣಪತಿ ದುಮ್ಮಾ ಉಳ್ವೇಕರ್** ಅವರು ಮತ್ಸ್ಯ ಸಿರಿ ಯೋಜನೆಯಲ್ಲಿ ಟ್ರಾಲರ್ ಅಥವಾ ಪರ್ಸಿಯನ್ ದೋಣಿಗಳನ್ನು ನಿರ್ಮಿಸಲು ಅವಕಾಶ ನೀಡುವ ಕುರಿತು ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

05. **ಶ್ರೀ ಕೇಶವ ಪ್ರಸಾದ್ ಎಸ್**. ಅವರು ಬೆಂಗಳೂರಿನ ಹೆಬ್ಬಾಳ ಫ್ಲೈ ಓವರ್ ಬಳಿ ದಿನನಿತ್ಯ ವಾಹನ ದಟ್ಟಣೆ ಹೆಚ್ಚಾಗಿರುವುದರಿಂದ ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿದ್ದು ಸರ್ಕಾರವು ಪರ್ಯಾಯ ಪರಿಹಾರವನ್ನು ಕಲ್ಪಿಸುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

06. **ಶ್ರೀ ಮಂಜುನಾಥ್ ಭಂಡಾರಿ** ಅವರು ರಾಜ್ಯದ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರನ್ನು ತೆಗೆದು ಹಾಕುವ ಪ್ರಕ್ರಿಯೆಗೆ ಸಂಬಂಧಿಸಿ ದೂರು ದಾಖಲಿಸುವ ಮತ್ತು ತನಿಖೆ ನಡೆಸಿ ವರದಿ ನೀಡುವ ಅಧಿಕಾರವನ್ನು ರಾಜ್ಯ ಸರ್ಕಾರದ ಹಂತದಿಂದ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಯ ಹಂತಕ್ಕೆ ನೀಡಿರುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

07. **ಶ್ರೀ ಪಿ.ಹೆಚ್. ಪೂಜಾರ್** ಅವರು ಬಾಗಲಕೋಟೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪಿಸುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮದ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

08. **ಡಾ. ಡಿ. ತಿಮ್ಮಯ್ಯ** ಅವರು ಪಿರಿಯಾಪಟ್ಟಣ ತಾಲ್ಲೂಕಿನ ಮಾಲಂಗಿ, ಚೌತಿ ಹಾಗೂ ಪಂಚವಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅರಣ್ಯದಂಚಿನ ಗ್ರಾಮಗಳಲ್ಲಿನ ಬುಡಕಟ್ಟು ಕುಟುಂಬದವರನ್ನು ಅರಣ್ಯದಿಂದ ಹೊರ ಹಾಕಿರುವುದರಿಂದ ಉಂಟಾಗಿರುವ ಸಮಸ್ಯೆ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

..4/

## 05. ನಿಯಮ 330ರ ಮೇರೆಗೆ

01. **ಶ್ರೀಯುತರುಗಳಾದ ಕೆ.ಎ. ತಿಪ್ಪೇಸ್ವಾಮಿ, ಎಸ್.ಎಲ್.ಭೋಜೇಗೌಡ, ಗೋವಿಂದರಾಜು ಮತ್ತು ಸಿ.ಎನ್. ಮಂಜೇಗೌಡ** ಅವರುಗಳು ರಾಜ್ಯದಲ್ಲಿ ಇತ್ತೀಚಿಗೆ ನಡೆದಿರುವ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ನೇಮಕಾತಿ ಪ್ರಕ್ರಿಯೆಯಲ್ಲಿನ ಅವ್ಯವಹಾರದ ಕುರಿತು ಪ್ರಸ್ತಾಪಿಸುವುದು.

02. **ಶ್ರೀಯುತರುಗಳಾದ ಮಾನ್ಯ ವಿರೋಧ ಪಕ್ಷದ ನಾಯಕರಾದ ಬಿ.ಕೆ.ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಪ್ರಕಾಶ್ ಕೆ. ರಾಥೋಡ್, ಡಾ, ಕೆ. ಗೋವಿಂದರಾಜು, ಸಲೀಂ ಅಹಮದ್ ಮತ್ತು ಕೆ. ಅಬ್ದುಲ್ ಜಬ್ಬರ್ ಹಾಗೂ ಇತರರುಗಳು** ರಾಜ್ಯದಲ್ಲಿ ನಿರುದ್ಯೋಗಿ ಯುವಕರ ಸಂಖ್ಯೆ ಹೆಚ್ಚಾಗಿದ್ದು, ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹುದ್ದೆಗಳು ಭರ್ತಿಯಾಗದೆ ಖಾಲಿ ಇರುವ ಕುರಿತು ಪ್ರಸ್ತಾಪಿಸುವುದು.

03. **ಶ್ರೀ ಸವದಿ ಲಕ್ಷ್ಮಣ** ಅವರು ಹಾವನೂರು ವರದಿಯನ್ವಯ ಮಾಳಿ–ಮಾಲಗರ ಸಮುದಾಯದವರಿಗೆ ಪ್ರವರ್ಗ 2ಎ ಜಾತಿ/ ಸಿಂಧುತ್ವ ಪ್ರಮಾಣ ಪತ್ರ ವಿತರಿಸುವ ಕುರಿತು ಪ್ರಸ್ತಾಪಿಸುವುದು.

04. **ಶ್ರೀ ಅಡಗೂರು ಹೆಚ್. ವಿಶ್ವನಾಥ್ ಮತ್ತು ಶ್ರೀ ಮರಿತಿಬ್ಬೇಗೌಡ** ಅವರುಗಳು ಇತ್ತೀಚಿಗೆ ರಾಜ್ಯದ ಜಿಲ್ಲೆಯೊಂದರಲ್ಲಿ ಧರ್ಮಪೀಠದ ಧರ್ಮಾಧಿಕಾರಿಯೊಬ್ಬರು ಮಠದಲ್ಲಿ ವ್ಯಾಸಂಗ ಮಾಡುತ್ತಿದ್ದ ಅಪ್ರಾಪ್ತ ವಯಸ್ಸಿನ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯವೆಸಗಿ, ಪೊಸ್ಕೋ ಕಾಯ್ದೆಯಡಿಯಲ್ಲಿ ಪ್ರಕರಣ ದಾಖಲಾಗಿರುವ ಹಿನ್ನಲೆಯಲ್ಲಿ ಸದರಿ ಕಾಯ್ದೆಯ ಪರಿಣಾಮಗಳ ಬಗ್ಗೆ ಪ್ರಸ್ತಾಪಿಸುವುದು.

05. **ಶ್ರೀ ಡಿ.ಎಸ್. ಅರುಣ್** ಅವರು ಶಿವಮೊಗ್ಗ ಜಿಲ್ಲೆಯಲ್ಲಿ ಉತ್ಪಾದನೆಯಾಗುವ ಅಡಿಕೆ ಮಾರಾಟದ ಒಟ್ಟು ವಹಿವಾಟಿನ ತೆರಿಗೆ ಆದಾಯದ ಬಗ್ಗೆ ಗೊಂದಲವಿರುವ ಕುರಿತು ಪ್ರಸ್ತಾಪಿಸುವುದು.

06. **ಡಾ.ತೇಜಸ್ವಿನಿಗೌಡ** ಅವರು ಕರ್ನಾಟಕದ ಶಾರದಾ ಪೀಠ ಸಂಸ್ಥಾಪಕರು ಹಾಗೂ ಶಾರದೆಯ ಆರಾಧಕರಾದ ಶೃಂಗೇರಿಯ ಆದಿಶಂಕರಾಚಾರ್ಯರ ಪರಂಪರೆಯ ಅನುಯಾಯಿಗಳಾದ ಕಾಶ್ಮೀರಿ ಪಂಡಿತರಿಗೆ ನಮ್ಮ ರಾಜ್ಯದಲ್ಲಿ ಆಶ್ರಯ ಕಲ್ಪಿಸಿ ರಕ್ಷಣೆ ನೀಡುವ ನೈತಿಕ ಹೊಣೆಗಾರಿಕೆ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**